ಕರ್ನಾಟಕ ಸರ್ಕಾರ

ತಾಂತ್ರಿಕ ಶಿಕ್ಷಣ ಇಲಾಖೆ

ಸಂ. DTE-ADMI0ACM2/ 20 /2023

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:27-07-2023.

-:: ಸು ತ್ತೋಲೆ ::-

**ವಿಷಯ:** 2023-24ನೇ ಸಾಲಿನಲ್ಲಿ ಪ್ರಥಮ ಸೆಮಿಸ್ಟರ್ ಡಿಪ್ಲೋಮಾ ಪ್ರವೇಶ ಸಂಬಂಧ - ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಪಾಲಿಟೆಕ್ನಿಕ್‌ಗಳಲ್ಲಿ ಪ್ರವೇಶ ಅವಧಿಯನ್ನು ವಿಸ್ತರಿಸುವ ಬಗ್ಗೆ.

**ಉಲ್ಲೇಖ:** 1. ಈ ಕಛೇರಿ ಸಮಸಂಖ್ಯೆ ಸುತ್ತೋಲೆ ಪತ್ರ ದಿ:08-05-2023, 02-06-2023, 21-06-2023, 04-07-2023, 11-07-2023.
2.ಹಲವು ಪಾಲಿಟೆಕ್ನಿಕ್ ಪ್ರಾಂಶುಪಾಲರುಗಳ ಮನವಿಗಳು.

********

2023-24ನೇ ಸಾಲಿನ ಡಿಪ್ಲೋಮಾ ಪ್ರವೇಶಕ್ಕೆ ಸಂಬಂಧಿಸಿದಂತೆ ಪಿಯುಸಿ ಪೂರಕ ಪರೀಕ್ಷೆಯಲ್ಲಿ ಅನುತ್ತೀರ್ಣಗೊಂಡ ಅಭ್ಯರ್ಥಿಗಳಿಗೆ ಹಾಗೂ ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುವ ವಿದ್ಯಾರ್ಥಿಗಳಿಗೆ ಅನ್ವಯವಾಗುವಂತೆ ಪ್ರವೇಶಾವಧಿಯನ್ನು ವಿಸ್ತರಿಸಬೇಕೆಂದು ಕೋರಿರುವುದನ್ನು ಒಟ್ಟಾರೆ ಎಲ್ಲಾ ಸಂಸ್ಥೆಗಳ ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯ ಮೇರೆಗೆ ಪ್ರಥಮ ಸೆಮಿಸ್ಟರ್‌ನಲ್ಲಿ ಭರ್ತಿ ಆಗದ ಉಳಿಕೆ ಸೀಟುಗಳಿಗೆ ಕೊನೆಯ **ದಿನಾಂಕ:05-08-2023 ರವರೆಗೆ** ಪ್ರವೇಶಾವಧಿಯನ್ನು ವಿಸ್ತರಿಸಿ ಅನುಮತಿ ನೀಡಲಾಗಿದೆ.

ಪ್ರಾಂಶುಪಾಲರು ಕೂಡಲೇ ಈ ಬಗ್ಗೆ ಕ್ರಮ ತೆಗೆದುಕೊಂಡು ಸ್ಥಳೀಯವಾಗಿ ಪತ್ರಿಕಾ ಪ್ರಕಟಣೆಯನ್ನು ನೀಡುವುದು. ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಪಾಲಿಟೆಕ್ನಿಕ್‌ಗಳ ಕೋರ್ಸುಗಳಲ್ಲಿ ಭರ್ತಿಯಾಗದೇ ಖಾಲಿ ಉಳಿದಿರುವ ಸೀಟುಗಳನ್ನು ಸಂಸ್ಥೆಯ ಸೂಚನಾಫಲಕದಲ್ಲಿ ಪ್ರಕಟಿಸಿ ವಿದ್ಯಾರ್ಥಿ/ಪೋಷಕರುಗಳ ಗಮನಕ್ಕೆ ತರಲು ಸೂಚಿಸಿದೆ.

ವಿಸ್ತರಿಸಲಾದ ಅವಧಿಯಲ್ಲಿ ಪ್ರವೇಶ ಪಡೆದ ಅಭ್ಯರ್ಥಿಗಳ ಸಂಬಂಧದಲ್ಲಿ ನಿಯಮಾನುಸಾರ ಕನಿಷ್ಠ ಹಾಜರಾತಿಯನ್ನು ಪೂರೈಸುವ ಷರತ್ತಿಗೊಳಪಟ್ಟಿರುತ್ತದೆ. ಸದರಿ ಅಭ್ಯರ್ಥಿಗಳಿಗೆ ಪ್ರಥಮ ಡಿಪ್ಲೋಮಾ ತರಗತಿಗಳನ್ನು ಪ್ರಾರಂಭಿಸಲು ಸೂಕ್ತ ವ್ಯವಸ್ಥೆ ಮಾಡುವುದಲ್ಲದೆ, ಮೇಲ್ಕಂಡ ವಿಸ್ತರಿಸಲಾದ ಅವಧಿಯಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ವಿಶೇಷ ತರಗತಿಗಳನ್ನು ತೆಗೆದುಕೊಳ್ಳುವುದರ ಮೂಲಕ ಪಠ್ಯಕ್ರಮದನ್ವಯ ನಿಗಧಿತ ಪಾಠ ಪ್ರವಚನಗಳನ್ನು ಮುಗಿಸುವಲ್ಲಿ ಕ್ರಮತೆಗೆದುಕೊಂಡು ಆಯುಕ್ತಾಲಯಕ್ಕೆ ವರದಿ ಮಾಡುವುದು. ಪ್ರಥಮ ಡಿಪ್ಲೋಮಾ ಪ್ರವೇಶಾವಧಿಯನ್ನು ಪುನಃ ವಿಸ್ತರಿಸಲಾಗುವುದಿಲ್ಲ. ಪ್ರಯುಕ್ತ, ಇದನ್ನು ಪಾಲಿಟೆಕ್ನಿಕ್‌ನ ಪ್ರಿನ್ಸಿಪಾಲರು ಗಮನದಲ್ಲಿರಿಸಿಕೊಂಡು ನಿಯಮಗಳ ಪ್ರಕಾರ ಪ್ರವೇಶವನ್ನು ಪೂರೈಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ.

*"ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ"*

ಜಂಟಿ ನಿರ್ದೇಶಕರು(ಆಡಳಿತ)
ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು

***ರಾಜ್ಯದ ಎಲ್ಲಾ ಸರ್ಕಾರಿ / ಅನುದಾನಿತ / - ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರಿಗೆ ಸೂಕ್ತ ಮಾಹಿತಿಗಾಗಿ ಹಾಗೂ ಅನುಸರಣೆಗಾಗಿ***

ಸದರಿ ಸುತ್ತೋಲೆಯನ್ನು ಸೂಚನಾ ಫಲಕದಲ್ಲಿ ಪ್ರಕಟಿಸಿ ನಿಯಮಗಳ ಪ್ರಕಾರ ತಮ್ಮ ಹಂತದಲ್ಲಿಯೇ ದಿ:05-08-2023ರ ಒಳಗೆ ಪ್ರವೇಶ ಪ್ರಕ್ರಿಯೆಯನ್ನು ಪೂರ್ಣಗೊಳಿಸತಕ್ಕದ್ದು.

**ಪ್ರತಿ ಮಾಹಿತಿಗಾಗಿ:-**

1. ಮಾನ್ಯ ಆಯುಕ್ತರವರ ಆಪ್ತಶಾಖೆಗೆ.
2. ಮಾನ್ಯ ನಿರ್ದೇಶಕರವರ ಆಪ್ತಶಾಖೆಗೆ.
3. ಕಾರ್ಯದರ್ಶಿಗಳು, ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು.
4. ಇ-ಗವರ್ನೆನ್ಸ್ ವಿಭಾಗಕ್ಕೆ - ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
5. ಇ.ಆರ್.ಎಸ್ ವಿಭಾಗಕ್ಕೆ - ಅರ್ಹತಾ ಪ್ರಮಾಣ ಪತ್ರ ವಿತರಿಸಲು ಅಗತ್ಯ ಕ್ರಮಕ್ಕಾಗಿ.
6. ಕಛೇರಿ ಪ್ರತಿ.